ಕರ್ನಾಟಕ ಸರ್ಕಾರ

ಸಂಖ್ಯೆ : HFW/485/HSH/2021 (part-1)

ಕರ್ನಾಟಕ ಸರ್ಕಾರ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ : 19/09/2022

## ಅಧಿಸೂಚನೆ

2020-21ನೇ ಸಾಲಿನ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವಿಶೇಷ ನೇಮಕಾತಿ ಸಮಿತಿಯ ಹೆಚ್ಚುವರಿ ಆಯ್ಕೆ ಪಟ್ಟಿಯಲ್ಲಿ ಪರಿಗಣಿಸಲಾದ ಅಭ್ಯರ್ಥಿಗಳಿಗೆ ಸರ್ಕಾರದ ಅಧಿಸೂಚನೆಗಳ ಸಂಖ್ಯೆ : ಆಕುಕ 485 ಹೆಚ್ಎಸ್ಹೆಚ್ 2022 (ಭಾಗ-1) (1), ಆಕುಕ 485 ಹೆಚ್ಎಸ್ಹೆಚ್ 2022 (ಭಾಗ-1) (2), ಮತ್ತು ಆಕುಕ 485 ಹೆಚ್ ಎಸ್ಹೆಚ್ 2022 (ಭಾಗ-1) (3), ದಿನಾಂಕ : 19/05/2022ರಲ್ಲಿ ಕ್ರಮವಾಗಿ 29 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳು, 01 ತಜ್ಞರು (ಇ.ಎನ್.ಟಿ) ಮತ್ತು 04 ತಜ್ಞರು (ನೇತ್ರ) ಹುದ್ದೆಗಳಿಗೆ ನೇಮಕ ಮಾಡಿ ಸ್ಥಳನಿಯುಕ್ತಿಗೊಳಿಸಿ ಆದೇಶಿಸಲಾಗಿದೆ. ಈ ಅಧಿಸೂಚನೆಗಳಲ್ಲಿ ಅಭ್ಯರ್ಥಿಗಳು ನೇಮಿಸಿ ಸ್ಥಳನಿಯುಕ್ತಿಗೊಳಿಸಲಾದ ಹುದ್ದೆಯ ಕರ್ತವ್ಯಕ್ಕೆ ದಿನಾಂಕ : 19/09/2022ರೊಳಗಾಗಿ ಹಾಜರಾಗಲು ಕಾಲಾವಕಾಶ ನಿಗಧಿಪಡಿಸಲಾಗಿದೆ.

ದಿನಾಂಕ : 05/09/2022ರ ಅಧಿಸೂಚನೆಗಳಲ್ಲಿ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ, ತಜ್ಞ ವೈದ್ಯರು (ಇ.ಎನ್.ಟಿ) ಮತ್ತು ತಜ್ಞ ವೈದ್ಯರು (ನೇತ್ರ) ಹುದ್ದೆಯ ಕರ್ತವ್ಯಕ್ಕೆ ಹಾಜರಾಗಲು ನಿಗಧಿಪಡಿಸಲಾಗಿದ್ದ ಸೇರುವಿಕೆ ಕಾಲಾವಕಾಶವನ್ನು ಆಡಳಿತಾತ್ಮಕ ಕಾರಣಗಳಿಗಾಗಿ, ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ನಿಯಮ-18(2)ರಡಿಯ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ **ದಿನಾಂಕ : 26/09/2022**ರವರೆಗೆ ವಿಸ್ತರಿಸಿ ಆದೇಶಿಸಿದೆ.

ಈ ಅಧಿಸೂಚನೆಯು ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ನಿಯಮ-18(2)ರಡಿ ಪ್ರತ್ಯೇಕ ಆದೇಶ ಮುಖೇನ ಸೇರುವಿಕೆ ಕಾಲವನ್ನು ವಿಸ್ತರಿಸಲಾದ ವೈದ್ಯಾಧಿಕಾರಿಗಳ ಪ್ರಕರಣಕ್ಕೆ ಅನ್ವಯಿಸತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ.

19/09/2022
(ಸಿ. ಮಂಜೂರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ಸೇವೆಗಳು)

19/09/2022

**ಇವರಿಗೆ :-**

ಸಂಬಂಧಪಟ್ಟ ವೈದ್ಯಾಧಿಕಾರಿಗಳು – ಈ ಅಧಿಸೂಚನೆಯನ್ನು ಇಲಾಖೆಯ ಅಧಿಕೃತ ಅಂತರ್ಜಾಲದಲ್ಲಿ ಪ್ರಕಟಿಸತಕ್ಕದ್ದು.

**ಅಗತ್ಯ ಕ್ರಮಕ್ಕಾಗಿ ಪ್ರತಿ.-**

1. ಮಹಾಲೇಖಪಾಲರು (ಎ&ಇ/ಲೆಕ್ಕಪತ್ರ/ಲೆಕ್ಕಪರಿಶೋಧನೆ), ಬೆಂಗಳೂರು.
2. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯ ಸೌಧ, ಬೆಂಗಳೂರು.
3. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯ ಸೌಧ, ಬೆಂಗಳೂರು.
4. ಸದಸ್ಯ ಕಾರ್ಯದರ್ಶಿ, ವಿಶೇಷ ನೇಮಕಾತಿ ಸಮಿತಿ ಹಾಗೂ ಮುಖ್ಯ ಆಡಳಿತಾಧಿಕಾರಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯ ಸೌಧ, ಬೆಂಗಳೂರು.
5. ಸಂಬಂಧಿಸಿದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು/ಜಿಲ್ಲಾ ಶಸ್ತ್ರಚಿಕಿತ್ಸಕರು – ಷರತ್ತಿನಲ್ಲಿ ಉಲ್ಲೇಖಿಸಿರುವ ದಾಖಲೆಗಳು ಅಭ್ಯರ್ಥಿಗಳಿಂದ ಕಡ್ಡಾಯವಾಗಿ ಪಡೆದು, ಕ್ರೋಢೀಕರಿಸಿ ಆಯುಕ್ತಾಲಯಕ್ಕೆ ಸಲ್ಲಿಸಲು ಸೂಚಿಸಿದೆ – **(ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಇವರ ಮುಖಾಂತರ)**.
6. ರಿಜಿಸ್ಟ್ರಾರ್, ಕರ್ನಾಟಕ ವೈದ್ಯಕೀಯ ಪರಿಷತ್ತು (ಕೆ.ಎಂ.ಸಿ), ನಂ. 16/6, ಮಿಲ್ಲರ್ ಟ್ಯಾಂಕ್ ಬೆಡ್ ಏರಿಯಾ, ವಸಂತನಗರ, ಬೆಂಗಳೂರು-560 052.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಮಾಹಿತಿಗಾಗಿ ಪ್ರತಿ :-**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಅಪರ ಕಾರ್ಯದರ್ಶಿ (ಸೇವೆಗಳು), ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು, ವಿಕಾಸ ಸೌಧ, ಬೆಂಗಳೂರು.

Scanned by CamScanner